# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಗುರುವಾರ ೩೦, ಅಕ್ಟೋಬರ್, ೨೦೨೫ (ಕಾರ್ತಿಕಾ , ೦೮, ಶಕವರ್ಷ, ೧೯೪೭)<br>BENGALURU, THURSDAY 30, OCTOBER, 2025 ( KARTHIKA , 08, SHAKAVARSHA, 1947) | ನಂ. ೬೭೭<br>No. 677 |
|---|---|---|

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಇ-ಸಂಗ್ರಹಣಾ ವೇದಿಕೆಯ ಗುತ್ತಿಗೆ ನಿರ್ವಹಣಾ ಮಾಡ್ಯೂಲ್‌ನಲ್ಲಿ (Contract Management Module)ನಲ್ಲಿ ಕಾಮಗಾರಿಗಳ ಮಾಹಿತಿಯನ್ನು ಅಪ್ ಲೋಡ್ ಮಾಡಿದ ನಂತರವೇ ಖಜಾನೆಯಿಂದ ಹಣ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಅಧಿಸೂಚನೆ ಸಂ:ಆಇ 758 ವೆಚ್ಚ-12/2023 ದಿನಾಂಕ:09.07.2024.
2. ಸರ್ಕಾರದ ಆದೇಶ ಸಂ: ಆಇ 758 ವೆಚ್ಚ-12/2023 ದಿನಾಂಕ:06.02.2025.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಕಚೇರಿ ಕಡತ ಸಂ:ಮು.ಕಾ:444:2025.

***********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಅಧಿಸೂಚನೆಯಲ್ಲಿ ದಿನಾಂಕ:01.08.2024 ರಿಂದ ಜಾರಿಗೆ ಬರುವಂತೆ Contract Management Module ಅನ್ನು ಎಲ್ಲಾ ರೀತಿಯ ಸಂಗ್ರಹಣೆಗಳಿಗೆ ನಿರ್ದಿಷ್ಟಪಡಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಅದರಂತೆ, ಕಾಮಗಾರಿಯ ಅಂದಾಜು ಸೃಜನೆಯಿಂದ ಆರಂಭವಾಗಿ ಕಾಮಗಾರಿ ಬಿಲ್ಲುಗಳ ಪಾವತಿವರೆಗಿನ ಪ್ರಕ್ರಿಯೆಯ ಎಲ್ಲಾ ಹಂತದ ಮಾಹಿತಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ವೇದಿಕೆ (KPPP) ಯಲ್ಲಿ ಕೈಗೊಳ್ಳಲು ಅವಕಾಶ ಕಲ್ಪಿಸಿಕೊಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿನ ಸರ್ಕಾರದ ಆದೇಶದಲ್ಲಿ ಕಳೆದ 5 ಹಣಕಾಸು ವರ್ಷಗಳ ಅವಧಿಯಲ್ಲಿ ಅಥವಾ ಅದಕ್ಕಿಂತ ಮೊದಲು ಇ-ಸಂಗ್ರಹಣಾ ವೇದಿಕೆಯ ಹಳೆಯ ಮತ್ತು ದಿನಾಂಕ:23.03.2024ರಂದು ಅನುಷ್ಠಾನಗೊಂಡಿರುವ ಹೊಸ ಆವೃತ್ತಿಗಳಲ್ಲಿ ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುವ ಮತ್ತು ಪ್ರಸಕ್ತ ಪ್ರಗತಿಯಲ್ಲಿರುವ ಕಾಮಗಾರಿಗಳ ಟೆಂಡರ್ ಮತ್ತು ಭೌತಿಕ ಹಾಗೂ ಆರ್ಥಿಕ ಪ್ರಗತಿಯ ವಿವರಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ವೇದಿಕೆಯಲ್ಲಿ ಕಲ್ಪಿಸಲಾಗಿರುವ Lateral Entry of Contract ಮೂಲಕ ಇ-ಸಂಗ್ರಹಣಾ ವೇದಿಕೆಯ ಗುತ್ತಿಗೆ ನಿರ್ವಹಣಾ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಮಾಡ್ಯೂಲ್‌ನಲ್ಲಿ (Contract Management Module) ಕಡ್ಡಾಯವಾಗಿ ಅಳವಡಿಸಲು ಕ್ರಮವಹಿಸುವಂತೆ ರಾಜ್ಯದ ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳಿಗೆ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ದಿ:10.09.2025ರಂದು ನಡೆದ ಕೆಡಿಪಿ ಸಭೆಯಲ್ಲಿ ಚರ್ಚಿಸಿದಂತೆ, ಟೆಂಡರ್ ಆಗಿರುವ ಒಟ್ಟು 36,709 ಕಾಮಗಾರಿಗಳಲ್ಲಿ ಕೇವಲ 505 ಕಾಮಗಾರಿಗಳು ಮಾತ್ರವೇ Contract Management Moduleನಲ್ಲಿ ಅಪ್ ಲೋಡ್ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಖಜಾನೆಗೆ ಹಣವನ್ನು ಬಿಡುಗಡೆ ಮಾಡುವ ಮೊದಲು ಸಂಬಂಧಿತ ಎಲ್ಲಾ ಕಾಮಗಾರಿಗಳನ್ನು ಕಡ್ಡಾಯವಾಗಿ ಇ-ಸಂಗ್ರಹಣಾ ವೇದಿಕೆಯ ಗುತ್ತಿಗೆ ನಿರ್ವಹಣಾ ಮಾಡ್ಯೂಲ್‌ನಲ್ಲಿ (Contract Management Module) ನಲ್ಲಿ ಅಪ್ ಲೋಡ್ ಮಾಡಿದ ನಂತರವೇ ಖಜಾನೆಯಿಂದ ಹಣ ಬಿಡುಗಡೆ ಮಾಡಲು ಕ್ರಮವಹಿಸುವಂತೆ ತುರ್ತಾಗಿ ಆದೇಶಿಸಲು ಸೂಚಿಸಿರುತ್ತಾರೆ.

ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂ:ಆಇ 758 ವೆಚ್ಚ-12/2023, ಬೆಂಗಳೂರು, ದಿನಾಂಕ:27.10.2025**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಟೆಂಡರ್ ಮೂಲಕ ಕೈಗೊಳ್ಳಲಾದ ಕಾಮಗಾರಿಗಳಿಗೆ ಹಣವನ್ನು ಖಜಾನೆಗೆ ಬಿಡುಗಡೆ ಮಾಡುವ ಮೊದಲು ಸಂಬಂಧಿತ ಎಲ್ಲಾ ಕಾಮಗಾರಿಗಳ ಮಾಹಿತಿಯನ್ನು ಕಡ್ಡಾಯವಾಗಿ ಇ-ಸಂಗ್ರಹಣಾ ವೇದಿಕೆಯ ಗುತ್ತಿಗೆ ನಿರ್ವಹಣಾ ಮಾಡ್ಯೂಲ್ (Contract Management Module)ನಲ್ಲಿ ಅಪ್ ಲೋಡ್ ಮಾಡಿದ ನಂತರವೇ ಖಜಾನೆಯಿಂದ ಹಣ ಬಿಡುಗಡೆ ಮಾಡಲು ಕ್ರಮವಹಿಸುವಂತೆ ರಾಜ್ಯದ ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳಿಗೆ ಹಾಗೂ ಖಜಾನೆ ಅಧಿಕಾರಿಗಳಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಾ:ಪಿ.ಸಿ.ಜಾಫರ್ )**
ಸರ್ಕಾರದ ಕಾರ್ಯದರ್ಶಿ (ಆ. ಮತ್ತು ಸಂ.)
ಆರ್ಥಿಕ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH